ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾದೀಶರ ನ್ಯಾಯಾಲಯ
ಯಾದಗಿರಿ.

**ಸಿ.ಸಿ. ನಂಃ 740/2018**

ಫಿರ್ಯಾಧಿಕಾರಃ ಕರ್ನಾಟಕ ಸರ್ಕಾರದ ಪರವಾಗಿ
ಗುರುಮಿಠಕಲ್ ಪೊಲೀಸ್ ಠಾಣೆ.

**// ವಿರುದ್ಧ //**

ಆರೋಪಿ **:** ದೇವಪ್ಪ ತಂದೆ ರುಕ್ಕಪ್ಪ,
ವಃ **40** ವರ್ಷ**,** ಸಾಃ ಅರಕೇರಾ**(**ಕೆ**)** ಗ್ರಾಮ**,**
ತಾಃ ಮತ್ತು ಜಿಃ ಯಾದಗಿರಿ**.**

ದೋಷಾರೋಪಣೆ

ನಾನು ಶ್ರೀ. ಅರುಣ ಚೌಗುಲೆ ಬಿ.ಎ.,ಎಲ್.ಎಲ್.ಬಿ.,(Honors) ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ.ಗಳು ಯಾದಗಿರಿ, ಈ ಕೆಳಕಂಡ ಆರೋಪಿತರು ಆದ ನಿಮ್ಮ ಮೇಲೆ ಈ ಮೂಲಕ ಕೆಳಕಂಡಂತೆ ದೋಷಾರೋಪಣೆಗೆ ಗುರಿಪಡಿಸುತ್ತೇನೆ.

ದಿನಾಂಕಃ 12.05.2018 ರಂದು ಬೆಳಗಿನ ಜಾವ 01.15 ಗಂಟೆಗೆ ಗುರುಮಿಠಕಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಅರಕೇರಾ(ಕೆ) ಕ್ರಾಸನಲ್ಲಿ ಆರೋಪಿತನಾದ ನೀವು ನಿಮ್ಮ ಕಿರಾಣಿ ಡಬ್ಬಾದ ಮುಂದೆ ಸಾರ್ವಜನಿಕ ಖುಲ್ಲಾ ಸ್ಥಳದಲ್ಲಿ ಅಕ್ರಮವಾಗಿ ಸರಕಾರದ ಯಾವುದೇ ಪರವಾನಿಗೆ ಇಲ್ಲದೆ 90 ಮಿಲಿಯ 50 ಓರಿಜಿನಲ್ ಚ್ಯಾಯಿಸ್ ಪೌಚಗಳು ಮತ್ತು 180 ಮಿಲಿಯ 12 ಓಲ್ಡ್ ಟವೆರನ್ ವಿಸ್ಕೀ ಪೌಚಗಳನ್ನು ಸಾರ್ವಜನಿಕರಿಗೆ ಕುಡಿಯಲು ಮಾರಾಟ ಮಾಡುತ್ತಿದ್ದು ಕಂಡುಬಂದಿದ್ದು, ಈ ಮೂಲಕ ಆರೋಪಿತನಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಆರೋಪಿತನ ಹೇಳಿಕೆ

ಪ್ರಶ್ನೆ-1ಃ ಮೇಲೆ ಓದಿ ಹೇಳಿದ ಆಪಾದನೆ/ದೋಷಾರೋಪಣೆ ತಿಳಿಯಿತೆ ಅಥವಾ ಅರ್ಥವಾಯಿತೇ?

ಉತ್ತರಃ ತಿಳಿಯಿತು.

ಪ್ರಶ್ನೆ-2ಃ ನೀವು ತಪ್ಪೊಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗ ಬಯಸುವಿರಾ?

ಉತ್ತರಃ ವಿಚಾರಣೆಯಾಗಬೇಕು.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ಇಂದು ದಿನಾಂಕಃ 07.03.2026 ರಂದು ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿಗೆ ಓದಿ ಹೇಳಲಾಯಿತು.)

ದಿನಾಂಕಃ 07.03.2026

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ಗಳು, ಯಾದಗಿರಿ.